ಕರ್ನಾಟಕ ಸರ್ಕಾರ

ನವಂಬರ್ 09, 2017

## ಮರಳು ನೀತಿ ಸರಳೀಕರಣ : ಜಿಲ್ಲಾಧಿಕಾರಿ ಬದಲಾಗಿ ಗಣಿ ಮತ್ತು ಭೂ ವಿಜ್ಞಾನ ಇಲಾಖಾ ನಿರ್ದೇಶಕರ ಅಧ್ಯಕ್ಷತೆಯಲ್ಲಿ ಕಾರ್ಯಪಡೆ ರಚನೆಗೆ ಸಂಪುಟ ಸಮ್ಮತಿ

**ಬೆಂಗಳೂರು, ನವಂಬರ್ 09:**

ನದಿ ಮೂಲದ ಮರಳು ಅಲಭ್ಯತೆಯಿಂದಾಗಿ ರಾಜ್ಯದಲ್ಲಿ ಉದ್ಭವಿಸಿರುವ ಮರಳು ಕೊರತೆಯನ್ನು ಸರಿದೂಗಿಸುವ ಸಲುವಾಗಿ ಉತ್ಪಾದನಾ ಮರಳು ( ಎಂ–ಸ್ಯಾಂಡ್ ) ನೀತಿಯನ್ನು ಸರಳೀಕರಿಸಿ, ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಕಾರ್ಯ ಪಡೆಯ ಬದಲಾಗಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ನಿರ್ದೇಶಕರ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಕಾರ್ಯಪಡೆ ರಚಿಸಲು ಸಚಿವ ಸಂಪುಟ ಸಮ್ಮತಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಗುರುವಾರ ಸಂಜೆ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಈ ನಿಟಿನಲ್ಲಿ ನಿರ್ಧಾರ ಕೈಗೊಳ್ಳಲಾಯಿತು ಎಂದು ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ ಅವರು ಪತ್ರಿಕಾ ಗೋಷ್ಠಿಯಲ್ಲಿ ಪ್ರಕಟಿಸಿದರು.

ಒಂದೆಡೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿನ ಕಾರ್ಯ ಪಡೆಗಳ ಮುಂದೆ ಸಾವಿರಾರು ಅರ್ಜಿಗಳು ಬಾಕಿ ಇವೆ. ಮತ್ತೊಂದೆಡೆ ಸಾಂಪ್ರದಾಯಿಕವಾಗಿ ನೂರಾರು ವರ್ಷಗಳಿಂದ ಮರಳು ಸಂಘಗಳನ್ನು ಮಾಡಿ ಮಾರಾಟ ಮಾಡುವ ಅನೇಕ ಜನಾಂಗದವರ ನೆರವಿಗೆ ಸರ್ಕಾರ ಧಾವಿಸಿದೆ. ಆದಕಾರಣ, ನಿಯಮಾವಳಿಗೆ ಅಗತ್ಯ ತಿದ್ದುಪಡಿ ಮಾಡಿ ಸಾಂಪ್ರದಾಯಿಕವಾಗಿ ಮರಳು ಗಣಿಗಾರಿಕೆ ಮಾಡುತ್ತಿರುವ ಪರಿಶಿಷ್ಟ ಜಾತಿಯ ಜನರಿಗೆ ಗುತ್ತಿಗೆ ನೀಡಲು ಕಗ್ಗಂಟಾಗಿರುವ ನಿಯಮಾವಳಿಗಳನ್ನು ಸರಳೀಕರಿಸಲು ಸಂಪುಟ ಒಪ್ಪಿಗೆ ನೀಡಿದೆ.

ಇದರಲ್ಲಿ ಕರಾವಳಿಗೆ ಜಿಲ್ಲೆಗಳ ಮರಳು ನೀತಿ ಸೇರಿದಂತೆ ಎಲ್ಲಾ ಮರಳು ವಹಿವಾಟು ಹಾಗೂ ವಿದೇಶದಿಂದ ಆಮದು ಮಾಡಿಕೊಳ್ಳು ಮರಳು ವ್ಯಾಪಾರಕ್ಕೂ ನೂತನ ನಿಯಮದಲ್ಲಿ ಮಾರ್ಪಾಡಿಗೆ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಸಚಿವರು ವಿವರಿಸಿದರು.

ಮುಂದಿನ ಶೈಕ್ಷಣಿಕ ವರ್ಷದಿಂದ ವೃತ್ತಿಪರ ಶಿಕ್ಷಣ ಸಂಸ್ಥೆಗಳಲ್ಲಿ ಶುಲ್ಕ ನಿಗದಿ ಮತ್ತು ಸೀಟು ಹಂಚಿಕೆ ಕುರಿತಂತೆ 2006 ರಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳೊಂದಿಗೆ

ರಾಜ್ಯ ಸರ್ಕಾರ ಮಾಡಿಕೊಂಡಿರುವ ಒಪ್ಪಂದದ ಜೊತೆಗೆ ಕೆಲವು ಮಾರ್ಪಾಡುಗಳ ಒಡಂಬಡಿಕೆಗೆ ರಾಜ್ಯ ಸಚಿವ ಸಂಪುಟ ಘಟನೋತ್ತರ ಅನುಮೋದನೆ ನೀಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ಗುರುವಾರ ಸಂಜೆ ನಡೆದ ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಈ ತೀರ್ಮಾನ ಕೈಗೊಳ್ಳಲಾಯಿತು ಎಂದು ಸಣ್ಣ ನೀರಾವರಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಟಿ. ಬಿ. ಜಯಚಂದ್ರ ಅವರು ಪತ್ರಿಕಾ ಗೋಷ್ಠಿಯಲ್ಲಿ ಪ್ರಕಟಿಸಿದರು.

ಖಾಸಗಿ ವೃತ್ತಿಪರ ಕೋರ್ಸ್‌ಗಳ ಪ್ರವೇಶ ನಿಯಂತ್ರಣ ಮತ್ತು ಶುಲ್ಕ ನಿಗದಿ ಅಧಿನಿಯಮದಂತೆ ಈ ಹಿಂದೆ ಮಾಡಿಕೊಂಡಿರುವ ಒಪ್ಪಂದದ ಜೊತೆಗೆ ಮಾರ್ಪಾಡು ಮಾಡಿರುವ ನಿಯಮಕ್ಕೆ ಸಚಿವ ಸಂಪುಟ ಸಮ್ಮತಿ ನೀಡಿದೆ.

## ಚಳಿಗಾಲದ ಅಧಿವೇಶನದಲ್ಲಿ ಕಂಬಳ ವಿಧೇಯಕ ಮಂಡನೆ

ರಾಜ್ಯದ ಕರಾವಳಿ ಜಿಲ್ಲೆಗಳಲ್ಲಿ ಸಂಸ್ಕೃತಿಯ ಅವಿಭಾಜ್ಯ ಅಂಗವಾಗಿ ಬೆಳೆದು ಬಂದಿರುವ ಕಂಬಳ ಸ್ಪರ್ಧೆಯನ್ನು ಮುಂದುವರೆಸಲು ರಾಜ್ಯ ಸರ್ಕಾರ ತಂದಿದ್ದ ಆಧ್ಯಾದೇಶಕ್ಕೆ ರಾಷ್ಟ್ರಪತಿಯವರು ಅಂಕಿತ ಹಾಕಿದ್ದಾರೆ. ಮುಂದಿನ ತಿಂಗಳಲ್ಲಿ ನಡೆಯಲಿರುವ ಕಂಬಳ ಸ್ಪರ್ಧೆಗೆ ಪೂರಕವಾದ ಶಾಸನ ತರುವ ಹಿನ್ನೆಲೆಯಲ್ಲಿ ಪ್ರಾಣಿಗಳಿಗೆ ಹಿಂಸೆ ಮಾಡುವುದನ್ನು ತಡೆಗಟ್ಟುವ ( ಕರ್ನಾಟಕ ತಿದ್ದುಪಡಿ ) ವಿಧೇಯಕ–2017 ವನ್ನು ಬೆಳಗಾವಿಯ ಚಳಿಗಾಲದ ಅಧಿವೇಶನದಲ್ಲಿ ಮಂಡಿಸಲು ಸಚಿವ ಸಂಪುಟ ನಿರ್ಧರಿಸಿದೆ ಎಂದು ಸಚಿವ ಜಯಚಂದ್ರ ತಿಳಿಸಿದರು.

## ಶ್ರಮ ಸಮರ್ಥ ಯೋಜನೆ

ರಾಜ್ಯದಲ್ಲಿ 12 ಲಕ್ಷ ಕಟ್ಟಡ ಮತ್ತು ಇತರ ನಿರ್ಮಾಣ ಕಾರ್ಮಿಕರಿದ್ದಾರೆ. ಪ್ರಸಕ್ತ ವರ್ಷದಲ್ಲಿ ಶ್ರಮ ಸಮರ್ಥ ಯೋಜನೆಯಡಿ 37,440 ಕಾರ್ಮಿಕರಿಗೆ ಕೌಶಲ್ಯ ತರಬೇತಿ ನೀಡುವ ಜೊತೆಗೆ 99.88 ಕೋಟಿ ರೂ ವೆಚ್ಚದಲ್ಲಿ ಉಪಕರಣಗಳನ್ನು ವಿತರಿಸಲು ಸಂಪುಟವು ಆಡಳಿತಾತ್ಮಕ ಅನುಮೋದನೆ ನೀಡಿದೆ.

## ಸಂಗೊಳ್ಳಿ ರಾಯಣ್ಣ ಕ್ಷೇತ್ರಾಭಿವೃದ್ಧಿಗೆ ಸಂಪುಟ ಒಪ್ಪಿಗೆ

ಬೆಳಗಾವಿ ಜಿಲ್ಲೆಯ ಬೈಲಹೊಂಗಲದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ಸೈನಿಕ ಶಾಲೆ ನಿರ್ಮಾಣವೂ ಒಳಗೊಂಡಂತೆ 267.67 ಕೋಟಿ ರೂ. ವೆಚ್ಚದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿಗೆ ಪೂರಕವಾದ ಉದ್ದೇಶಿತ ಯೋಜನೆಗಳಿಗೆ

ಸಂಪುಟ ಒಪ್ಪಿಗೆ ನೀಡಿದೆ. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರಾಭಿವೃದ್ಧಿ ಪ್ರಾಧಿಕಾರದಲ್ಲಿ ಬೆಳಗಾವಿ ಜಿಲ್ಲಾಧಿಕಾರಿಯನ್ನೂ ಸದಸ್ಯರಾಗಿ ನೇಮಕ ಮಾಡಲು ಅಗತ್ಯ ತಿದ್ದುಪಡಿ ಮಸೂದೆಯನ್ನು ತರಲು ಸಂಪುಟ ಸಮ್ಮತಿ ನೀಡಿದೆ.

## ಏಕೀಕೃತ ವಿಶ್ವವಿದ್ಯಾಲಯದ ಕಾಮಗಾರಿಗಳಿಗೆ ಅನುಮೋದನೆ

ಮಂಡ್ಯದಲ್ಲಿ ರಾಷ್ಟ್ರೀಯ ಉಚ್ಚತರ್ ಶಿಕ್ಷಾ ಅಭಿಯಾನ ಯೋಜನೆಯಡಿ ಅಂತಾರಾಷ್ಟ್ರೀಯ ಮಟ್ಟದ ಏಕೀಕೃತ ವಿಶ್ವವಿದ್ಯಾಲಯಕ್ಕೆ ಅಗತ್ಯವಿರುವ ಕಟ್ಟಡ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಅಂದಾಜು 42 ಕೋಟಿ ರೂ. ಯೋಜನೆಗೆ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

## ರಾಣಿ ಅಬ್ಬಕ್ಕ ಭವನ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆ

ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ತಾಲ್ಲೂಕಿನ ಉಳ್ಳಾಳದಲ್ಲಿ ಎಂಟು ಕೋಟಿ ರೂ. ಅಂದಾಜು ವೆಚ್ಚದಲ್ಲಿ ರಾಣಿ ಅಬ್ಬಕ್ಕ ಭವನ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿದೆ.

## ಯಾದಗಿರಿ ಜಿಲ್ಲಾ ನ್ಯಾಯಾಲಯದ ಸಂಕೀರ್ಣಕ್ಕೆ ಉಚಿತ ನಿವೇಶನ

ಯಾದಗಿರಿ ಜಿಲ್ಲಾ ನ್ಯಾಯಾಲಯದ ಸಂಕೀರ್ಣ ನಿರ್ಮಾಣಕ್ಕಾಗಿ ಯಾದಗಿರಿ ತಾಲ್ಲೂಕಿನ ಯಾದಗಿರಿ ಬಿ. ಗ್ರಾಮದಲ್ಲಿ 10 ಎಕರೆ ಜಮೀನನ್ನು ಉಚಿತವಾಗಿ ಮಂಜೂರು ಮಾಡಲು ಸಂಪುಟ ಸಮ್ಮತಿಸಿದೆ.

## ಒಂದು ಲಕ್ಷ ಮನೆ ನಿರ್ಮಾಣಕ್ಕೆ ಆಡಳಿತಾತ್ಮಕ ಅನುಮೋದನೆ

ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿನ 431.11 ಎಕರೆ ಸರ್ಕಾರಿ ಗೋಮಾಳ ಹಾಗೂ ಖರಾಬು ಜಮೀನುಗಳಲ್ಲಿ ಬಹು ಮಹಡಿ ವಸತಿ ಯೋಜನೆಯಲ್ಲಿ ಒಂದು ಲಕ್ಷ ಮನೆ ನಿರ್ಮಾಣ ಮಾಡಲು ರಾಜ್ಯ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ. ಈ ಯೋಜನೆಯನ್ನು ರಾಜೀವ್ ಗಾಂಧಿ ವಸತಿ ನಿಗಮಕ್ಕೆ ಹಸ್ತಾಂತರಿಸಿ ಕಡುಬಡವರಿಗೆ ಕೈಗೆಟಕುವ ದರದಲ್ಲಿ ಮನೆ ನಿರ್ಮಿಸಿ ಕೊಡಲು ಸಂಪುಟ ಒಪ್ಪಿಗೆ ನೀಡಿದೆ.

## ಖಾಸಗಿ ವೈದ್ಯಕೀಯ ಸಂಸ್ಥೆಗಳ ವಿಧೇಯಕಕ್ಕೆ ತಾತ್ವಿಕ ಒಪ್ಪಿಗೆ

ಖಾಸಗಿ ವೈದ್ಯಕೀಯ ಸಂಸ್ಥೆಗಳ ವಿಧೇಯಕಕ್ಕೆ ಸಚಿವ ಸಂಪುಟ ತಾತ್ವಿಕ ಒಪ್ಪಿಗೆ ನೀಡಿದೆ. ಮುಖ್ಯಮಂತ್ರಿಯವರ ಪರಾಮರ್ಶೆಯ ನಂತರ ಸದನದಲ್ಲಿ ಮಂಡಿಸಲು ಸಚಿವ ಸಂಪುಟ ಸಮ್ಮತಿಸಿದೆ.

**ಬುಯ್ಯಾರ್ ಬಹುಗ್ರಾಮ ಕುಡಿಯುವ ನೀರು ಯೋಜನೆಗೆ ಅನುಮೋದನೆ**

ವಿಜಯಪುರ ಜಿಲ್ಲೆಯ ಇಂಡಿ ತಾಲ್ಲೂಕಿನ ಬುಯ್ಯಾರ್ ಮತ್ತು ಇತರ 11 ಗ್ರಾಮಗಳಿಗೆ ಸಂಬಂಧಿಸಿದಂತೆ 36.06 ಕೋಟಿ ರೂ. ಪರಿಷ್ಕೃತ ಅಂದಾಜಿನ ಬಹುಗ್ರಾಮ ಕುಡಿಯುವ ನೀರು ಯೋಜನೆ ಅನುಷ್ಠಾನಕ್ಕೆ ಸಚಿವ ಸಂಪುಟ ಅನುಮೋದನೆ ನೀಡಿದೆ.

**ಅಮರಾವತಿ ಗ್ರಾಮದಲ್ಲಿ ಟ್ರಕ್ ಟರ್ಮಿನಲ್**

ಬಳ್ಳಾರಿ ಜಿಲ್ಲೆಯ ಹೊಸಪೇಟೆ ತಾಲ್ಲೂಕಿನ ಅಮರಾವತಿ ಗ್ರಾಮದಲ್ಲಿ 37.82 ಎಕರೆ ಜಮೀನಿನಲ್ಲಿ ದೇವರಾಜ್ ಅರಸ್ ಟ್ರಕ್ ಟರ್ಮಿನಲ್ ಸಂಸ್ಥೆ ವತಿಯಿಂದ 33.55 ಕೋಟಿ ರೂ. ಅಂದಾಜು ವೆಚ್ಚದಲ್ಲಿ ಟ್ರಕ್ ಟರ್ಮಿನಲ್ ನಿರ್ಮಾಣ ಕಾಮಗಾರಿಗೆ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ.

**2018 ರ ದಿನದರ್ಶೀ ವರ್ಷದಲ್ಲಿ ಸರ್ಕಾರಿ ರಜಾ ದಿನಗಳು**

2018 ನೇ ಸಾಲಿನ ದಿನದರ್ಶೀ ವರ್ಷದಲ್ಲಿ 23 ಸಾರ್ವತ್ರಿಕ ರಜೆಗಳನ್ನು ವಿದ್ಯುಕ್ತವಾಗಿ ಘೋಷಣೆ ಮಾಡುವ ನಿರ್ಣಯಕ್ಕೆ ಸಚಿವ ಸಂಪುಟ ಸಮ್ಮತಿ ನೀಡಿದೆ.

**ಮೈಸೂರು ಕಾಗದ ಕಾರ್ಖಾನೆ : ಸರ್ಕಾರದ ವಶದಲ್ಲೇ ಮುಂದುವರೆಯಲಿದೆ**

ಭದ್ರಾವತಿಯ ಮೈಸೂರು ಕಾಗದ ಕಾರ್ಖಾನೆಯ ಖಾಯಂ ನೌಕರರಿಗೆ ಸ್ವಯಂ ನಿವೃತ್ತಿ ಯೋಜನೆ ಹಾಗೂ ಗುತ್ತಿಗೆ ನೌಕರರರಿಗೆ ಸ್ವಯಂ ಪ್ರತಿಕರಣ ಯೋಜನೆಗೆ ಸಂಪುಟ ಅನುಮತಿ ನೀಡಿದೆ. ಈ ಕಾರ್ಖಾನೆಯಲ್ಲಿರುವ ದಾಸ್ತಾನನ್ನು ಮಾರಾಟ ಮಾಡಿ ಪರಿಹಾರ ನೀಡಲು ಹಾಗೂ ಕಾರ್ಖಾನೆಯನ್ನು ಸರ್ಕಾರದ ವಶದಲ್ಲೇ ಮುಂದುವರೆಸಲು ಸಂಪುಟ ನಿರ್ಧರಿಸಿದೆ.

**ಕಂದಾಯ ಗ್ರಾಮಗಳಾಗಿ ಘೋಷಿಸಲು ಕರ್ನಾಟಕ ಭೂ ಕಂದಾಯ ಕಾಯಿದೆಗೆ ತಿದ್ದುಪಡಿ**

ರಾಜ್ಯದಲ್ಲಿ ಲಂಬಾಣಿ ತಾಂಡಾ, ಗೊಲ್ಲರ ಹಟ್ಟಿ ಇನ್ನಿತರೆ ದಾಖಲೆ-ರಹಿತ ಜನವಸತಿಗಳನ್ನು ಕಂದಾಯ ಗ್ರಾಮಗಳಾಗಿ ಘೋಷಿಸಲು ಅನುವಾಗುವಂತೆ ಕರ್ನಾಟಕ ಭೂ ಕಂದಾಯ ಕಾಯಿದೆ ಪರಿಚ್ಛೇಧ 94 ( ಡಿ ) ಗೆ ತಿದ್ದುಪಡಿ ತರಲು ಸಂಪುಟ ಒಪ್ಪಿಗೆ ನೀಡಿದೆ

**ಹುಲಿಯಾರ್ ಇನ್ನು ಪಟ್ಟಣ ಪಂಚಾಯಿತಿ !**

ತುಮಕೂರು ಜಿಲ್ಲೆಯ ಚಿಕ್ಕನಾಯಕನ ಹಳ್ಳಿ ತಾಲ್ಲೂಕಿನ ಹುಲಿಯಾರ್ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯತಿಯಾಗಿ ಪರಿವರ್ತಿಸಲು ಸಂಪುಟ ಅನುಮೋದಿಸಿದೆ. ಮೈಸೂರಿನಲ್ಲಿ ಕೈಗಾರಿಕಾ ತರಬೇತಿ ಸಂಸ್ಥೆಯ ಆವರಣದಲ್ಲಿ ಸ್ಥಾಪಿಸಲಿರುವ ಸೆಂಟರ್ ಆಫ್ ಎಕ್ಸಲೆನ್ಸ್‌ನಲ್ಲಿ ಕಟ್ಟಡ ನಿರ್ಮಾಣ ಹಾಗೂ ಉಪಕರಣಗಳ ಖರೀದಿಗೆ 48.6 ಕೋಟಿ ಅಂದಾಜು

ವೆಚ್ಚಕ್ಕೆ ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ. ಈ ಕೇಂದ್ರದಲ್ಲಿ ವಾರ್ಷಿಕವಾಗಿ 300 ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗುವುದು ಎಂದು ಜಯಚಂದ್ರ ಅವರು ಹೇಳಿದರು.

***********

ಡಿ ಪಿ ಎಂ